548(73) ಶ್ರೀ ಕಾರಜೋಳ್ ಗೋವಿಂದ್ ಮಕಟಪ್ಪ (ಮುಧೋಳ) ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಅಂತ್ಯೋದಯ, ಹಳದಿ ಕಂಪ್ಯೂಟರ್ ಹಳದಿ ಕಾರ್ಡುಗಳನ್ನು ಪಡೆದಿರುವ ಕುಟುಂಬಗಳ ಸಂಖ್ಯೆ ಎಷ್ಟು (31–12–2003 ರವರೆಗೆ ವಿವರ ನೀಡುವುದು);

ಆ) ರಾಜ್ಯದಲ್ಲಿ ಬಡವರಿಗೆ ವಿತರಿಸಲಾಗಿರುವ ಪಡಿತರ ಚೀಟಿಗಳನ್ನು ರದ್ದುಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದರೆ, ರದ್ದುಪಡಿಸಿರುವ ಕಾರ್ಡುಗಳ ಸಂಖ್ಯೆ ಎಷ್ಟು;

ಈ) ಪಡಿತರ ಚೀಟಿಗಳನ್ನು ಪಡೆಯಲು ಅರ್ಹರಿದ್ದ ಬಡ ಕುಟುಂಬಗಳ ಸಂಖ್ಯೆ ಎಷ್ಟು ಮತ್ತು ಅರ್ಹ ಕುಟುಂಬಗಳಿಗೆ ಎಷ್ಟು ದಿನಗಳಲ್ಲಿ ಪಡಿತರ ಚೀಟಿಗಳನ್ನು ವಿತರಿಸಲಾಗುವುದು?

ಶ್ರೀ ಹೆಚ್.ಎಸ್. ಮಹದೇವ ಪ್ರಸಾದ್ (ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು)

ಅ) ದಿನಾಂಕ 31–12–2004ರವರೆಗೆ ಅಂತ್ಯೋದಯ ಅನ್ನ ಯೋಜನೆಯ ಪಡಿತರ ಚೀಟಿಗಳನ್ನು ಪಡೆದ ಕುಟುಂಬಗಳ ಸಂಖ್ಯೆ: 719700. ಬಿ.ಪಿ.ಎಲ್. ಪಡಿತರ ಚೀಟಿ ಪಡೆದ ಕುಟುಂಬಗಳ ಸಂಖ್ಯೆ 6338990.

ಆ) ಅನರ್ಹರಿಗೆ ನೀಡಲಾಗಿರುವ ಬಿಪಿಎಲ್ ಪಡಿತರ ಚೀಟಿಗಳನ್ನು ಮಾತ್ರ ರದ್ದುಪಡಿಸಲಾಗಿರುತ್ತದೆ.

ಇ) 31–12–2003ರವರೆಗೆ ಯಾವುದೇ ಕಾರ್ಡುಗಳನ್ನು ರದ್ದು ಮಾಡಿರುವುದಿಲ್ಲ. ಆಗಸ್ಟ್ 1, 2004ರಿಂದ ಡಿಸೆಂಬರ್ 2004ರವರೆಗೆ ಅನರ್ಹ ಕುಟುಂಬಗಳನ್ನು ಪತ್ತೆ ಹಚ್ಚಿ ರದ್ದುಪಡಿಸಿರುವ ಒಟ್ಟು ಪಡಿತರ ಚೀಟಿಗಳ ಸಂಖ್ಯೆ: 854583.

ಈ) ಪಡಿತರ ವ್ಯವಸ್ಥೆಯಿಂದ ಬಿಟ್ಟು ಹೋದ ಅರ್ಹ ಬಿಪಿಎಲ್ ಕುಟುಂಬಗಳನ್ನು ಹಾಗೂ ಅನರ್ಹರನ್ನು ಗುರುತಿಸಲು ದಿನಾಂಕ 1–1–2005 ರಿಂದ ಏಪ್ರಿಲ್ 2005ರವರೆಗೆ ಮನೆ ಮನೆ ಪುನರ್ ಸಮೀಕ್ಷೆ ಕಾರ್ಯ ಕೈಗೊಳ್ಳಲಾಗಿದ್ದು ಸಮೀಕ್ಷೆಯಲ್ಲಿ ಗುರ್ತಿಸಿದ ಅರ್ಹ ಮತ್ತು ಅನರ್ಹ ಕುಟುಂಬಗಳ ಪಟ್ಟಿಯನ್ನು ಗ್ರಾಮ ಸಭೆಗಳಲ್ಲಿಟ್ಟು ಅನುಮೋದನೆ ಪಡೆದು ನಂತರ ಅರ್ಹ ಫಲಾನುಭವಿಗಳಿಗೆ ಹಳದಿ ಪಡಿತರ ಚೀಟಿ ನೀಡುವ ಕಾರ್ಯ ಕೈಗೊಳ್ಳಲಾಗುವುದು.

549(127) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಇಲ್ಲಿಯವರೆಗೆ ವಿತರಿಸಿರುವ ಹಳದಿ ಕಾರ್ಡ್‌ಗಳ ಸಂಖ್ಯೆ ಎಷ್ಟು;

ಆ) ಇವುಗಳ ಪೈಕಿ ಬೆಂಗಳೂರು ನಗರದಲ್ಲಿ ವಿತರಿಸಿರುವ ಕಾರ್ಡ್‌ಗಳ ಸಂಖ್ಯೆ ಎಷ್ಟು;

ಇ) ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳ ಸಂಖ್ಯೆ ಎಷ್ಟು;

ಈ) ಅರ್ಹ ಫಲಾನುಭವಿಗಳಿಗೆ ಹಳದಿ ಕಾರ್ಡ್‌ಗಳನ್ನು ವಿತರಿಸದೆ ಅನರ್ಹ ಫಲಾನುಭವಿಗಳಿಗೆ ಈ ಕಾರ್ಡ್‌ಗಳನ್ನು ವಿತರಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಸರ್ಕಾರ ಈ ಲೋಪದೋಷಗಳನ್ನು ತಡೆಗಟ್ಟಲು ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ಎಸ್. ಮಹದೇವಪ್ರಸಾದ್ (ಆಹಾರ ಮತ್ತು ನಾಗರೀಕ ಸರಬರಾಜ ಸಚಿವರು)

ಅ) 2004ನೇ ಡಿಸೆಂಬರ್ ಅಂತ್ಯದವರೆಗೆ ವಿತರಿಸಿರುವ ಹಳದಿ ಕಾರ್ಡ್‌ಗಳ ಸಂಖ್ಯೆ: 6338990.

ಆ) ಬೆಂಗಳೂರು ಐಆರ್‌ಎ ವಿತರಿಸಿರುವ ಕಾರ್ಡ್ ಸಂಖ್ಯೆ: 205134 ಡಿಸೆಂಬರ್ 2004ರ ಅಂತ್ಯಕ್ಕೆ.

ಇ) 2004ನೇ ಡಿಸೆಂಬರ್ ಅಂತ್ಯಕ್ಕೆ ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಗಿನ ಕುಟುಂಬಗಳ ಸಂಖ್ಯೆ: 6338990.

ಈ) ಹೌದು.

ಉ) ಬಿ.ಪಿ.ಎಲ್. ಪಟ್ಟಿಯಲ್ಲಿ ಕೈಬಿಟ್ಟು ಹೋದ ಅರ್ಹ ಕುಟುಂಬಗಳನ್ನು ಸೇರ್ಪಡೆ ಮಾಡಲು, ಅನರ್ಹ ಕುಟುಂಬದವರು ಪಟ್ಟಿಯಲ್ಲಿ ಸೇರ್ಪಟ್ಟಿದ್ದನ್ನು ಕೈಬಿಡಲು, ಮನೆ–ಮನೆ ಪುನರ್ ಸಮೀಕ್ಷೆ ಕಾರ್ಯಕೈಗೊಳ್ಳಲು ಸರ್ಕಾರ, ಆದೇಶ ಸಂಖ್ಯೆ: ಅನಾಸ 114 ಡಿಆರ್ 2004, ದಿನಾಂಕ 10–1–2005ರಲ್ಲಿ ಹೊರಡಿಸಿದೆ. ಅದರಂತೆ, ಪುನರ್ ಸಮೀಕ್ಷೆ ಕಾರ್ಯ ಪ್ರಾರಂಭವಾಗಿದ್ದು, 2005ರ ಏಪ್ರಿಲ್ ಮಾಹೆಗೆ ಮುಕ್ತಾಯಗೊಳ್ಳಲಿದೆ, ಲೋಪದೋಷಗಳನ್ನು ತಡೆಗಟ್ಟಲು, ಮನೆ–ಮನೆ ಪುನರ್ ಸಮೀಕ್ಷೆ ಕಾರ್ಯದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಜನ ಪ್ರತಿನಿಧಿಗಳು, ಸ್ತ್ರೀಶಕ್ತಿ ಸಂಘದವರು ಮತ್ತು ಸ್ವಸಹಾಯ ಸಂಘದ ಪ್ರತಿನಿಧಿಗಳನ್ನು ಸಮೀಕ್ಷಾ ತಂಡದಲ್ಲಿ ಸೇರಿಸಿಕೊಂಡಿದ್ದು, ಸಮೀಕ್ಷೆಯಲ್ಲಿ ಹೊರಬರುವ ಅರ್ಹರ, ಅನರ್ಹರ ಪಟ್ಟಿಯನ್ನು ಗ್ರಾಮ ಸಭೆ ಮತ್ತು ವಾರ್ಡ್‌ಸಭೆಗಳಲ್ಲಿಟ್ಟು ಅನುಮೋದಿಸಿ, ಅರ್ಹ ಕುಟುಂಬದವರಿಗೆ ಹಳದಿ ಪಡಿತರ ಚೀಟಿಗಳನ್ನು ವಿತರಿಸಲು ಸರ್ಕಾರ ಕ್ರಮ ಕೈಗೊಳ್ಳಲಾಗಿದೆ.